# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ಮಂಜೂರಾಗಿರುವ 02 ಹಿರಿಯ ಸಹಾಯಕ ಸಾರ್ವಜನಿಕ ಅಭಿಯೋಜಕರ ಹುದ್ದೆಗಳನ್ನು ಮುಂದುವರೆಸುವ ಬಗ್ಗೆ..

10 MAY 2019

*****

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 156 ಸೇಲೋಯು 2016, ದಿನಾಂಕ: 28.01.2017.
2) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ದಿನಾಂಕ: 17.12.2018ರ ಪತ್ರ ಸಂಖ್ಯೆ: ಕಲೋ/ಸಿಬ್ಬಂದಿ(1)/54/2013-14.

D.R.A.

**ಪ್ರಸ್ತಾವನೆ:**

1. ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪ್ರಧಾನ ಕಛೇರಿಗೆ 02 ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗಳನ್ನು ಎರಡು ವರ್ಷಗಳ ಅವಧಿಗೆ (ದಿನಾಂಕ: 31.03.2019ರವರೆಗೆ) ತಾತ್ಕಾಲಿಕವಾಗಿ ಸೃಜಿಸಲು ಮಂಜೂರಾತಿ ನೀಡಲಾಗಿದೆ.

2. ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರು ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ 11 ಖಾಯಂ ಹಾಗೂ 05 ತಾತ್ಕಾಲಿಕ ಒಟ್ಟಾರೆ 16 ಅಪರ ನಿಬಂಧಕರು ಹುದ್ದೆಗಳು ಮಂಜೂರಾಗಿರುದ್ದು, ಪ್ರತಿ ಅಪರ ನಿಬಂಧಕರು (ವಿಚಾರಣೆಗಳು) ಶಾಖೆಯಲ್ಲಿ ಮಂಡನಾಧಿಕಾರಿಯಾಗಿ ಕಾರ್ಯನಿರ್ವಹಿಸಲು ಒಟ್ಟಾರೆ 16 ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗಳ ಅವಶ್ಯಕತೆಯಿರುತ್ತವೆ. ಪ್ರಸ್ತುತ 9 ಖಾಯಂ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ (ಮಂಡನಾಧಿಕಾರಿ) ಹುದ್ದೆಗಳಿದ್ದು, ಸರ್ಕಾರವು ಆದೇಶ ಸಂಖ್ಯೆ.ಸಿಆಸುಇ 156 ಸೇಲೋಯು 2016, ದಿನಾಂಕ:28.01.2017ರಲ್ಲಿ 02 ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗಳನ್ನು ತಾತ್ಕಾಲಿಕವಾಗಿ ಸೃಜಿಸಿದ್ದು, ಈ ಅವಧಿಯು ದಿನಾಂಕ:31.03.2019ಕ್ಕೆ ಮುಕ್ತಾಯಗೊಳ್ಳಲಿದೆಯೆಂದು ತಿಳಿಸಿರುತ್ತಾರೆ.

3. ಮುಂದುವರೆದು, ಇಲಾಖಾ ವಿಚಾರಣೆ ಪ್ರಕರಣಗಳ ಸಂಖ್ಯೆಯು ದಿನದಿಂದ ದಿನಕ್ಕೆ ಹೆಚ್ಚಾಗುತ್ತಲೇ ಇರುವುದರಿಂದ ಕೆಲಸದ ಒತ್ತಡವು ಸಹ ಅಧಿಕವಾಗುತ್ತಿದೆ, ದಿನಾಂಕ:01.12.2018ರಲ್ಲಿದ್ದಂತೆ 6722 ದೂರು ಪ್ರಕರಣಗಳು ಮತ್ತು 3288 ಇಲಾಖಾ ವಿಚಾರಣಾ ಪ್ರಕರಣಗಳು ಬಾಕಿಯಿರುತ್ತವೆಂದು ತಿಳಿಸುತ್ತಾ, ಕರ್ನಾಟಕ ಲೋಕಾಯುಕ್ತ ಅಧಿನಿಯಮ 12(3)ರಡಿಯಲ್ಲಿ ಎದುರುದಾರ ಸರ್ಕಾರಿ ನೌಕರರ ವಿರುದ್ಧ ಇಲಾಖಾ ವಿಚಾರಣೆಯನ್ನು ಕೈಗೊಳ್ಳಲು 883 ವರದಿಗಳನ್ನು ಸರ್ಕಾರಕ್ಕೆ ಕಳುಹಿಸಲಾಗಿದ್ದು, ಇಲಾಖಾ ವಿಚಾರಣೆಗೆ ಈ ಸಂಸ್ಥೆಗೆ ವಹಿಸುವ ಆದೇಶ ಬರುವುದು ಸರ್ಕಾರದ ಹಂತದಲ್ಲಿ ಬಾಕಿ ಇದ್ದು, ಆದೇಶಗಳು ಬಂದ ನಂತರದಲ್ಲಿ ಇಲಾಖಾ ವಿಚಾರಣಾ ಪ್ರಕರಣಗಳ ಸಂಖ್ಯೆಯು ಇನ್ನೂ ಅಧಿಕವಾಗುತ್ತದೆಂದು ತಿಳಿಸಿರುತ್ತಾರೆ.

4. ಪ್ರಸ್ತುತ ಇಬ್ಬರು ವಿಚಾರಣಾಧಿಕಾರಿಗಳಿಗೆ ಒಬ್ಬರು ಮಂಡನಾಧಿಕಾರಿಗಳ ಸೇವೆ ಲಭ್ಯವಾಗುತ್ತಿರುವುದರಿಂದ ಇಲಾಖಾ ವಿಚಾರಣಾ ಪ್ರಕರಣಗಳನ್ನು ಕಾಲಮಿತಿಯೊಳಗೆ ವಿಲೇವಾರಿಗೊಳಿಸಲು ಕಷ್ಟವಾಗುತ್ತಿದೆಯೆಂದು ತಿಳಿಸುತ್ತಾ, ತಾತ್ಕಾಲಿಕವಾಗಿ ದಿನಾಂಕ:31.03.2019ರವರೆಗೆ ಮಂಜೂರಾಗಿರುವ 02 ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗಳನ್ನು ಖಾಯಂ ಆಗಿ ಮಂಜೂರು ಮಾಡುವಂತೆ ಹಾಗೂ 05 ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗಳನ್ನು ಒಂದು ವರ್ಷದವರೆಗೆ ಮಂಜೂರು ಮಾಡಿದ ಆದೇಶ ಹೊರಡಿಸುವಂತೆ ಸರ್ಕಾರವನ್ನು ಕೋರಲು ಮಾನ್ಯ ಲೋಕಾಯುಕ್ತರಿಂದ ನಿರ್ದೇಶಿಸಲ್ಪಟ್ಟಿರುವುದಾಗಿ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರು ತಿಳಿಸಿರುತ್ತಾರೆ.

--- 2 -)

5. ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 58 ಎಸ್‌ಆರ್‌ಎಸ್ 1979, ದಿನಾಂಕ: 27.09.1979ರನ್ವಯ ತಾತ್ಕಾಲಿಕವಾಗಿ ಸೃಜಿಸಲಾದ ಹುದ್ದೆಗಳ ಮುಂದುವರಿಕೆಯ ಅಗತ್ಯತೆಯ ಬಗ್ಗೆ ಪರಿಶೀಲಿಸಿ ಆರ್ಥಿಕ ಇಲಾಖೆಯ ಸಹಮತಿಯಿದೆಯೆಂದು ಭಾವಿಸಿ ಆಡಳಿತ ಇಲಾಖೆಯೇ ಮುಂದುವರೆಸಬಹುದೆಂದು ತಿಳಿಸಲಾಗಿದೆ.

6. ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 131 ಸೇಲೋಯು 2018(1)**
**ಬೆಂಗಳೂರು, ದಿನಾಂಕ: 08.05.2019.**

7. ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪ್ರಧಾನ ಕಛೇರಿಗೆ ತಾತ್ಕಾಲಿಕವಾಗಿ ಮಂಜೂರಾಗಿರುವ **02(ಎರಡು) ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ (ಮಂಡನಾಧಿಕಾರಿ) ಹುದ್ದೆಗಳನ್ನು ದಿನಾಂಕ:01.04.2019ರಿಂದ ಒಂದು ವರ್ಷದ ಅವಧಿಗೆ ಅಂದರೆ ದಿನಾಂಕ:31.03.2020ರವರೆಗೆ** ಮುಂದುವರೆಸಿ ಆದೇಶಿಸಲಾಗಿದೆ.

8. ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 1 ಟಿಎಫ್‌ಪಿ 96, ದಿನಾಂಕ:10-07-1996ರಲ್ಲಿ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಎಲ್.ಶಾರದ 08.5.19
(ಎಲ್.ಶಾರದ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜಾಗೃತ ವಿಭಾಗ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು(ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು(ಇ & ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು(ಎ &ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು, ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.
5. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
6. ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ, 6ನೇ ಮಹಡಿ, ಕೆಹೆಚ್‌ಬಿ ಕಾಂಪ್ಲೆಕ್ಸ್, ಕಾವೇರಿ ಭವನ, ಬೆಂಗಳೂರು-560009.
7. ಅಪರ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನ್ಯೂ ಪಬ್ಲಿಕ್ ಆಫೀಸ್ ಬಿಲ್ಡಿಂಗ್, ನೃಪತುಂಗ ರಸ್ತೆ, ಬೆಂಗಳೂರು560001.
8. ಶಾಖಾಧಿಕಾರಿ, ಆರ್ಥಿಕ ಇಲಾಖೆ(ವೆಚ್ಚ-12), ವಿಧಾನಸೌಧ, ಬೆಂಗಳೂರು.
9. ಶಾಖಾ ರಕ್ಷಾ ಕಡತ/ ಇಲಾಖೆಯ ಅಂತರ್‌ಜಾಲ ತಾಣ/ಹೆಚ್ಚುವರಿ ಪ್ರತಿಗಳು.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ಹೆಚ್ಚುವರಿಯಾಗಿ 02 ಹಿರಿಯ ಸಹಾಯಕ ಸಾರ್ವಜನಿಕ ಅಭಿಯೋಜಕರ ಹುದ್ದೆಗಳನ್ನು ತಾತ್ಕಾಲಿಕವಾಗಿ ಸೃಜಿಸುವ ಬಗ್ಗೆ.

*****

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 21 ಸೇಲೋಯು 2016, ದಿನಾಂಕ: 18-04-2016.
2) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ದಿನಾಂಕ: 06.06.2016, 30.06.2016, ಹಾಗೂ 27.09.2016ರ ಪತ್ರಗಳ ಸಂಖ್ಯೆ: ಕಲೋ/ಸಿಬ್ಬಂದಿ(1)/54/2013-14

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರಿ ಆದೇಶದನ್ವಯ ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪ್ರಧಾನ ಕಛೇರಿಗೆ ತಾತ್ಕಾಲಿಕವಾಗಿ ಮಂಜೂರಾಗಿದ್ದ 02 ಅಪರ ನಿಬಂಧಕರು (ವಿಚಾರಣೆಗಳು), 06 ಸಹಾಯಕ ಸಿಬ್ಬಂದಿ ಹುದ್ದೆಗಳು, ಒಟ್ಟು 08 ಹುದ್ದೆಗಳನ್ನು ಖಾಯಂ ಆಗಿ ಮಂಜೂರು ಮಾಡಲಾಗಿದೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಪತ್ರಗಳಲ್ಲಿ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರು ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ಅಪರ ನಿಬಂಧಕರು (ವಿಚಾರಣೆಗಳು) ಹುದ್ದೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು, ಕರ್ನಾಟಕ ಲೋಕಾಯುಕ್ತ ಅಧಿನಿಯಮ 1984ರಡಿ ದಾಖಲಾಗುವ ಪ್ರಕರಣಗಳ ಪರಿಶೀಲನೆ, ವಿಚಾರಣೆ, ಸರ್ಕಾರದ ಬೇರೆ ಬೇರೆ ಇಲಾಖೆಗಳಿಂದ ಬರುವಂತಹ ಶಿಸ್ತು ಪ್ರಕರಣಗಳ ಪರವಾಗಿ ಇಲಾಖಾ ವಿಚಾರಣೆ, ಭ್ರಷ್ಟಾಚಾರ ತಡೆ ಅಧಿನಿಯಮ 1988ರಡಿ ದಾಖಲಾಗಿರುವ ಪ್ರಕರಣಗಳಲ್ಲಿ ಒಳಗೊಂಡ ಸರ್ಕಾರಿ ನೌಕರರ ವಿರುದ್ಧ ಇಲಾಖಾ ವಿಚಾರಣೆ ಮತ್ತು ಸರ್ಕಾರದಿಂದ ಲೋಕಾಯುಕ್ತ ಸಂಸ್ಥೆಗೆ ವಿಚಾರಣೆಗೆ ವಹಿಸಿಕೊಡುವಂತಹ ಪ್ರಕರಣಗಳ ಪರಿಶೀಲನೆ, ವಿಚಾರಣಾ ಕಾರ್ಯಗಳನ್ನು ನಡೆಸುತ್ತಿದ್ದು, ಸದರಿ ವಿಚಾರಣೆಗಳನ್ನು ನಡೆಸಲು ಹಾಗೂ ತ್ವರಿತವಾಗಿ ವಿಲೇವಾರಿ ಮಾಡಲು ಮಂಡನಾಧಿಕಾರಿಗಳಾಗಿ ಕಾರ್ಯನಿರ್ವಹಿಸಲು ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗಳು ಅವಶ್ಯವಿರುವುದಾಗಿ ತಿಳಿಸಿರುತ್ತಾರೆ.

ಹಾಗೂ, ಪ್ರಸ್ತುತ ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ 11 ಅಪರ ನಿಬಂಧಕರು (ವಿಚಾರಣೆಗಳು) ಹುದ್ದೆಗಳಿದ್ದು, 09 ಅಪರ ನಿಬಂಧಕರು(ವಿಚಾರಣೆಗಳು) ಹುದ್ದೆಗಳಿಗೆ ಮಾತ್ರ ಪ್ರತಿ ವಿಚಾರಣಾಧಿಕಾರಿಗಳಿಗೆ ಒಬ್ಬರಂತೆ 09 ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗಳು ಮಂಜೂರು ಮಾಡಲಾಗಿದ್ದು, ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಖಾಯಂ ಆಗಿ ಮಂಜೂರಾಗಿರುವ 02 ಅಪರ ನಿಬಂಧಕರು (ವಿಚಾರಣೆಗಳು) ಹುದ್ದೆಗಳಿಗೆ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗಳು ಮಂಜೂರಾಗಿರದ ಕಾರಣ, ಈ ಅಪರ ನಿಬಂಧಕರ ಮುಂದೆ ಶಿಸ್ತು ಪ್ರಾಧಿಕಾರದ ಪರವಾಗಿ ಪ್ರತಿನಿಧಿಸಲು ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗಳು ಅವಶ್ಯವಿದ್ದು, ಅದರಂತೆ, ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪ್ರಧಾನ ಕಛೇರಿಗೆ 02 ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗಳನ್ನು ಮಂಜೂರು ಮಾಡುವಂತೆ ಗೌರವಾನ್ವಿತ ಉಪಲೋಕಾಯುಕ್ತರ ಶಿಫಾರಸ್ಸಿನನ್ವಯ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಈ ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 156 ಸೇಲೋಯು 2016**
**ಬೆಂಗಳೂರು, ದಿನಾಂಕ: 28.01.2017.**

ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪ್ರಧಾನ ಕಛೇರಿಗೆ 02 ಹಿರಿಯ ಸಹಾಯಕ ಸರ್ಕಾರಿ

...2

ಅಭಿಯೋಜಕರ ಹುದ್ದೆಗಳನ್ನು ಎರಡು ವರ್ಷಗಳ ಅವಧಿಗೆ (ದಿನಾಂಕ: 31.03.2019ರವರೆಗೆ) ತಾತ್ಕಾಲಿಕವಾಗಿ ಸೃಜಿಸಲು ಮಂಜೂರಾತಿ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ದಿನಾಂಕ:16.01.2017ರ ಟಿಪ್ಪಣಿ ಸಂಖ್ಯೆ: ಆಇ 983 ವೆಚ್ಚ-12/2016ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಉಮಾ.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜಾಗೃತ ವಿಭಾಗ)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು(ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು(ಇ & ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು(ಎ &ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಶಾಖಾಧಿಕಾರಿ, ಆರ್ಥಿಕ ಇಲಾಖೆ(ವೆಚ್ಚ-12), ವಿಧಾನಸೌಧ, ಬೆಂಗಳೂರು.
6. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

ಸಂಖ್ಯೆ:ಕಲೋ/ಸಿಬ್ಬಂದಿ(1)/54/2013-14 ದಿನಾಂಕ:02/02/2017

ಹಿಂ ಬ ರ ಹ

ಮೇಲ್ಕಾಣಿಸಿದ ಸರ್ಕಾರದ ಆದೇಶದ ಪ್ರತಿಯನ್ನು ಕೆಳಕಂಡವರ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.

ನಿಬಂಧಕರು,
ಕರ್ನಾಟಕ ಲೋಕಾಯುಕ್ತ,
ಬೆಂಗಳೂರು.

ಪ್ರತಿಯನ್ನು ಕೆಳಕಂಡವರ ಮಾಹಿತಿಗಾಗಿ ರವಾನಿಸಲಾಗಿದೆ:

1. ಉಪ ನಿಬಂಧಕರು (ಆಡಳಿತ)-1 & 2, ಕಲೋ, ಬೆಂಗಳೂರು.
2. ಮಾನ್ಯ ಲೋಕಾಯುಕ್ತರವರ ಆಪ್ತ ಸಹಾಯಕರು, ಕಲೋ, ಬೆಂಗಳೂರು.
3. ಮಾನ್ಯ ಉಪ ಲೋಕಾಯುಕ್ತ-1 & 2ರವರ ಆಪ್ತ ಸಹಾಯಕರು, ಕಲೋ, ಬೆಂಗಳೂರು.
4. ಎಲ್ಲಾ ಸ.ನಿ.ಆ) / ಮ್ಯಾನೇಜರ್, ಕಲೋ, ಬೆಂಗಳೂರು.
5. ನಿಬಂಧಕರವರ ಆಪ್ತ ಸಹಾಯಕರು, ಕಲೋ, ಬೆಂಗಳೂರು.
6. ಎಲ್ಲಾ ಕ.ಅ./ ಲೆ.ಪ.ಅ./ ವಿ.ನಿ., ಕಲೋ, ಬೆಂಗಳೂರು.
7. ಸಹಾಯಕ ಗ್ರಂಥಪಾಲಕರು, ಕಲೋ, ಬೆಂಗಳೂರು.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪ್ರಧಾನ ಕಛೇರಿ ಬೆಂಗಳೂರಿಗೆ ತಾತ್ಕಾಲಿಕವಾಗಿ ಮಂಜೂರಾಗಿರುವ 05 ಅಪರ ನಿಬಂಧಕರು (ವಿಚಾರಣೆಗಳು) ಮತ್ತು 15 ಸಹಾಯಕ ಸಿಬ್ಬಂದಿ ಹುದ್ದೆಗಳನ್ನು ಮುಂದುವರೆಸುವ ಬಗ್ಗೆ.

*****

ಓದಲಾಗಿದೆ:

1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 72 ಸೇಲೋಯು 2017, ದಿನಾಂಕ:26.12.2017.
2) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 130 ಸೇಲೋಯು 2018. ದಿನಾಂಕ:31.01.2019.
3) ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ 156 ಸೇಲೋಯು 2016, ದಿನಾಂಕ:28.01.2017.
4) ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ 131 ಸೇಲೋಯು 2018(1), ದಿನಾಂಕ:08.05.2019.
5) ಸರ್ಕಾರದ ಆದೇಶ ಸಂಖ್ಯೆ.ಸಿಆಸುಇ 131 ಸೇಲೋಯು 2018(2), ದಿನಾಂಕ:08.05.2019.
6) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರ ಸಂಖ್ಯೆ: ಕಲೋ/ಸಿಬ್ಬಂದಿ(1)/61/2010-2011, ದಿನಾಂಕ:03.01.2020 ಹಾಗೂ 17.01.2020
7) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಪತ್ರ ಸಂಖ್ಯೆ: ಕಲೋ/ ಸಿಬ್ಬಂದಿ(1)/27/2019-20, ದಿನಾಂಕ:09.01.2020.

ಪ್ರಸ್ತಾವನೆ:

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾದ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಗೊಳಿಸಲು ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪ್ರಧಾನ ಕಛೇರಿಗೆ ಈ ಕೆಳಕಂಡ 20 ಹುದ್ದೆಗಳನ್ನು ದಿನಾಂಕ:31.03.2019ರವರೆಗೆ ಎರಡು ವರ್ಷಗಳ ಅವಧಿಗೆ ತಾತ್ಕಾಲಿಕವಾಗಿ ಸೃಜಿಸಿ ಆದೇಶಿಸಲಾಗಿದೆ.

| ಕ್ರ. ಸಂ. | ಪದನಾಮ | ಸಂಖ್ಯೆ |
|---|---|---|
| 1) | ಅಪರ ನಿಬಂಧಕರು(ವಿಚಾರಣೆಗಳು) | 05 ಹುದ್ದೆಗಳು |
| 2) | ತೀರ್ಪು ಬರಹಗಾರರು | 05 ಹುದ್ದೆಗಳು |
| 3) | ಪ್ರಥಮ ದರ್ಜೆ ಸಹಾಯಕರು | 05 ಹುದ್ದೆಗಳು |
| 4) | ದಲಾಯತ್ | 05 ಹುದ್ದೆಗಳು |
| | ಒಟ್ಟು | 20 ಹುದ್ದೆಗಳು |

ಮೇಲೆ (2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಕರ್ನಾಟಕ ಲೋಕಾಯುಕ್ತ ಪ್ರಧಾನ ಕಛೇರಿಗೆ

-2-

ತಾತ್ಕಾಲಿಕವಾಗಿ ಸೃಜಿಸಲಾದ ಮೇಲ್ಕಂಡ 20 ಹುದ್ದೆಗಳನ್ನು ದಿನಾಂಕ:01.04.2019 ರಿಂದ ಮತ್ತೊಂದು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಮುಂದುವರಿಸಿ ಆದೇಶಿಸಲಾಗಿದೆ.

ಮೇಲೆ (3)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪ್ರಧಾನ ಕಛೇರಿಗೆ 02 ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ ಹುದ್ದೆಗಳನ್ನು ಎರಡು ವರ್ಷಗಳ ಅವಧಿಗೆ (ದಿನಾಂಕ: 31.03.2019ರವರೆಗೆ) ತಾತ್ಕಾಲಿಕವಾಗಿ ಸೃಜಿಸಲು ಮಂಜೂರಾತಿ ನೀಡಲಾಗಿದೆ ಹಾಗೂ ಮೇಲೆ (4) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಸದರಿ ಹುದ್ದೆಗಳನ್ನು ಮತ್ತೊಂದು ವರ್ಷದ ಅವಧಿಗೆ (ದಿನಾಂಕ:31.03.2020ರವರೆಗೆ) ಮುಂದುವರೆಸಿ ಆದೇಶಿಸಲಾಗಿದೆ.

ಮೇಲೆ (5) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪ್ರಧಾನ ಕಛೇರಿಗೆ 05(ಐದು) ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ (ಮಂಡಸಾಧಿಕಾರಿ) ಹುದ್ದೆಗಳನ್ನು ದಿನಾಂಕ:01.04.2019ರಿಂದ ಒಂದು ವರ್ಷದ ಅವಧಿಗೆ ಅಂದರೆ ದಿನಾಂಕ:31.03.2020ರವರೆಗೆ ತಾತ್ಕಾಲಿಕವಾಗಿ ಸೃಜಿಸಿ ಆದೇಶಿಸಲಾಗಿದೆ

ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ದೂರು ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದ್ದು ಮತ್ತು ವಿಚಾರಣೆಗೆ ಒಳಪಡುತ್ತಿರುವ ಪ್ರಕರಣಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ತಾತ್ಕಾಲಿಕವಾಗಿ ಸೃಜಿಸಲಾಗಿರುವ ಮೇಲ್ಕಂಡ 27 (ಪಟ್ಟಿಯಲ್ಲಿರುವ 20 ಹುದ್ದೆಗಳು + 07 ಹಿರಿಯ ಸಹಾಯಕ ಸರ್ಕಾರಿ ಅಭಿಯೋಜರ (ಮಂಡನಾಧಿಕಾರಿ) ಹುದ್ದೆಗಳು) ಹುದ್ದೆಗಳನ್ನು ಖಾಯಂ ಆಗಿ ಮುಂದುವರಿಸುವಂತೆ ಕೋರುತ್ತಾ, ಮೇಲೆ (6) ಮತ್ತು (7)ರಲ್ಲಿ ಓದಲಾದ ಕ್ರಮವಾಗಿ ದಿನಾಂಕ:03.01.2020 ಹಾಗೂ 09.01.2020ರ ಪತ್ರಗಳಲ್ಲಿ ಗೌರವಾನ್ವಿತ ಲೋಕಾಯುಕ್ತರವರ ನಿರ್ದೇಶನದ ಮೇರೆಗೆ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಈ ಪ್ರಸ್ತಾವನೆಯನ್ನು ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 5 ಸೇಲೋಯು 2020</u>

<u>ಬೆಂಗಳೂರು, ದಿನಾಂಕ:07.05.2020.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಕರ್ನಾಟಕ ಲೋಕಾಯುಕ್ತ ಪ್ರಧಾನ ಕಛೇರಿಗೆ ತಾತ್ಕಾಲಿಕವಾಗಿ ಸೃಜಿಸಲಾದ ಈ ಕೆಳಕಂಡ 27 ಹುದ್ದೆಗಳನ್ನು ದಿನಾಂಕ:01.04.2020 ರಿಂದ ಮತ್ತೊಂದು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಮುಂದುವರಿಸಿ ಆದೇಶಿಸಲಾಗಿದೆ.

| ಕ್ರ. ಸಂ. | ಪದನಾಮ | ಸಂಖ್ಯೆ |
|---|---|---|
| 1) | ಅಪರ ನಿಬಂಧಕರು(ವಿಚಾರಣೆಗಳು) | 05 ಹುದ್ದೆಗಳು |

14

| | | |
|---|---|---|
| 2) | ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು | 07 ಹುದ್ದೆಗಳು |
| 3) | ತೀರ್ಪು ಬರಹಗಾರರು | 05 ಹುದ್ದೆಗಳು |
| 4) | ಪ್ರಥಮ ದರ್ಜೆ ಸಹಾಯಕರು | 05 ಹುದ್ದೆಗಳು |
| 5) | ದಲಾಯತ್ | 05 ಹುದ್ದೆಗಳು |
| | ಒಟ್ಟು | 27 ಹುದ್ದೆಗಳು |

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 85 ವೆಚ್ಚ-12 2020, ದಿನಾಂಕ:19.03.2020ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ದಿನಾಂಕ 07.05.2020
(ಎಲ್. ಶಾರದ)
ಸರ್ಕಾರದ ಉಪ ಕಾರ್ಯದರ್ಶಿ,
ಸಿ.ಆ.ಸು.ಇಲಾಖೆ (ಜಾಗೃತ ವಿಭಾಗ).

ಇವರಿಗೆ:

1. ಪ್ರಧಾನ ಮಹಾಲೇಖಪಾಲರು(ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು(ಇ & ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು(ಎ &ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಅಪರ ನಿರ್ದೇಶಕರು , ರಾಜ್ಯ ಹುಜೂರು ಖಜಾನೆ, ನ್ಯೂ ಪಬ್ಲಿಕ್ ಆಫೀಸ್ ಬಿಲ್ಡಿಂಗ್, ನೃಪತುಂಗ ರಸ್ತೆ, ಬೆಂಗಳೂರು-01.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-12)/(ಸೇವೆಗಳು), ವಿಧಾನಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು